(ಇಂದು ದಿನಾಂಕಃ 06–11–2024 ರಂದು ಸಾಕ್ಷಿಯನ್ನು ತೆರೆದ ನ್ಯಾಯಾಲಯಕ್ಕೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.)

ಮುಂದುವರೆದ ಮುಖ್ಯ ವಿಚಾರಣೆ ಃ ಶ್ರೀ ಹೆಚ್ ಡಿ ಜಿ ವಕೀಲರಿಂದ ಃ-

ನಾನು ಸಲ್ಲಿಸಿರುವ ದಾಖಲೆಗಳನ್ನು ಈಗ ನೋಡಿ ಗುರುತಿಸಿದ್ದು ಅದನ್ನು ಕ್ರಮವಾಗಿ ಈ ಕೆಳಗಿನಂತೆ ಗುರುತಿಸಲಾಗಿದೆ.

1) ದಿನಾಂಕ 27-12-2021 ರಂದು ಮಾಡಲಾದ ಕೈಗಡ ಸಾಲ ಪತ್ರದ ಮೂಲ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.1 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿ.ಪಿ.1(ಎ) ಎಂದು ಗುರುತಿಸಲಾಯಿತು. ಪ್ರತಿವಾದಿಯರ ಸಹಿಯನ್ನು ನಿ.ಪಿ.1(ಬಿ) ಎಂದು ಗುರುತಿಸಲಾಯಿತು.

2) ದಿನಾಂಕ 15-07-2022 ರಂದು ವಕೀಲರ ಮೂಲಕ ಪ್ರತಿವಾದಿಯರಿಗೆ ನೀಡಿದ ನೋಟಿಸಿನ ಪ್ರತಿಯನ್ನು ನಿ.ಪಿ.2 ಎಂದು ಗುರುತಿಸಲಾಯಿತು.

3) ಅಂಚೆ ರಶೀದಿಯನ್ನು ನಿ.ಪಿ.3 ಎಂದು ಗುರುತಿಸಲಾಯಿತು.

4) ಅಂಚೆ ಸ್ವೀಕೃತಿಯನ್ನು ನಿ.ಪಿ.4 ಎಂದು ಗುರುತಿಸಲಾಯಿತು.

ಆದಕಾರಣ ದಾವೆಯನ್ನು ಪುರಸ್ಕರಿಸಬೇಕಾಗಿ ವಿನಂತಿ.

ಪಾಟೀಸವಾಲು ಃ ಶ್ರೀ ಆರ್ ಎಸ್ ಎಂ ವಕೀಲರಿಂದ ಃ-

ಶ್ರೀ.ಎಸ್.ಎ.ಪಿ ವಕೀಲರು ಪಾಟೀಸವಾಲಿಗೆ ಸಮಯವಕಾಶ ಕೋರಿದ್ದು, ಸಮಯವಕಾಶ ನೀಡಲಾಯಿತು.

*(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)*

**ಓ. ಹೇ. ಕೇ. ಸರಿ. ಇದೆ.**

(ನವೀನ ಎಫ್. ಡಿಸೋಜಾ)
**ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಮ್.ಎಫ್.ಸಿ.**
**ನವಲಗುಂದ.**